## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯದಲ್ಲಿ ಪೋಲಿಸ್ ಇಲಾಖೆಯವರು ಸಂಚಾರಿ ಇ-ಚಲನ್ ಮೂಲಕ ವಿಧಿಸಿದ ದಂಡದ ಮೊತ್ತದಲ್ಲಿ ರಿಯಾಯಿತಿ ನೀಡುವ ಕುರಿತು. .

ಓದಲಾಗಿದೆ:
1. ಗೌರವಾನ್ವಿತ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮತ್ತು ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ ದಿನಾಂಕ:27-01-2023.
2. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪತ್ರ ಸಂಖ್ಯೆ: ಸಾಆ/ಪ್ರವರ್ತನ-3/ವೈ.ವ.-29/2022-23, ದಿನಾಂಕ: 30.01.2023.
3. ಸರ್ಕಾರದ ಆದೇಶ ಸಂಖ್ಯೆ ಟಿಡಿ 27 ಟಿಡಿಓ 2023 ದಿನಾಂಕ:02.02.2023.
4. ಗೌರವಾನ್ವಿತ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮತ್ತು ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯ ನಡವಳಿ ದಿನಾಂಕ: 14-02-2023.
5. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪತ್ರ ಸಂಖ್ಯೆ: ಸಾಆ/ಪ್ರವರ್ತನ-3/ವೈ.ವ.-29/2022-23, ದಿನಾಂಕ:15-02-2023.

****

**ಪ್ರಸ್ತಾವನೆ:**

ಮೇಲೆ ಓದಲಾದ (1) ರ ಗೌರವಾನ್ವಿತ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮತ್ತು ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 27-01-2023 ರಂದು ನಡೆದ ಸಭೆಯ ನಡವಳಿಯಲ್ಲಿ ಈ ಕೆಳಕಂಡಂತೆ ನಿರ್ಣಯಿಸಲಾಗಿರುತ್ತದೆ:

**"it is resolved to request the Transport Department to take steps at the earliest and report compliance in order to ensure"access to justice for all"**

ಮೇಲೆ ಓದಲಾದ(2)ರ ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ದಿನಾಂಕ:30-01-2023 ರ ಪ್ರಸ್ತಾವನೆಗಳಲ್ಲಿ ರಾಜ್ಯಾದ್ಯಂತ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50 ಅನ್ನು ರಿಯಾಯಿತಿ ನೀಡುವ ಸಂಬಂಧ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ(3)ರ ಆದೇಶದಲ್ಲಿ ದಿನಾಂಕ:11.02.2023ರ ಒಳಗಾಗಿ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ ಒಂದು ಬಾರಿಯ ಕ್ರಮವಾಗಿ (onetime measure) ಮಾತ್ರ ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ (4) ರ ಗೌರವಾನ್ವಿತ ಉಚ್ಚ ನ್ಯಾಯಾಲಯದ ನ್ಯಾಯಾಧೀಶರು ಮತ್ತು ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:14-02-2023 ರಂದು ನಡೆದ ಸಭೆಯ ನಡವಳಿಯಲ್ಲಿ ಸರ್ಕಾರದ ದಿನಾಂಕ:02-02-2023 ರ ಆದೇಶದಲ್ಲಿ ರಿಯಾಯಿತಿ ನೀಡಲಾದ ಅವಧಿಯನ್ನು ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ದಿನಾಂಕ 11-02-2023 ರೊಳಗಿನ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ ಸರ್ಕಾರದ ಆದೇಶ ಹೊರಡಿಸಿದ ದಿನಾಂಕದಿಂದ 15 ದಿನಗಳವರೆಗೆ ವಿಸ್ತರಿಸಲು ನಿರ್ಣಯಿಸಲಾಗಿರುತ್ತದೆ. ಅದರಂತೆ, ಮೇಲೆ ಓದಲಾದ (5)ರ ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ ಇವರ ಪತ್ರದಲ್ಲಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿ, ಸೂಕ್ತ ಆದೇಶ ಹೊರಡಿಸಲು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಟಿಡಿ 27 ಟಿಡಿಓ 2023**
**ಬೆಂಗಳೂರು, ದಿನಾಂಕ:03-03-2023.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಪೊಲೀಸ್ ಇಲಾಖೆಯಲ್ಲಿ ಸಂಚಾರಿ ಇ-ಚಲನ್‌ನಲ್ಲಿ ದಿನಾಂಕ 11-02-2023 ರೊಳಗೆ ದಾಖಲಾದ ಪ್ರಕರಣಗಳಿಗೆ ಮಾತ್ರ ಅನ್ವಯವಾಗುವಂತೆ, ಪೊಲೀಸ್ ಇಲಾಖೆಯ ಸಂಚಾರಿ ಇ-ಚಲನ್‌ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಮತ್ತೊಂದು ಬಾರಿಗೆ ಶೇ.50 ರಷ್ಟು ರಿಯಾಯಿತಿ ನೀಡಿ ಆದೇಶಿಸಿದೆ.

ಈ ರಿಯಾಯಿತಿಯು ದಿನಾಂಕ:04.03.2023 ರಿಂದ ಅನ್ವಯವಾಗುವಂತೆ 15 ದಿನಗಳವರೆಗೆ ಇತ್ಯರ್ಥಗೊಳ್ಳುವ ಪ್ರಕರಣಗಳಿಗೆ ಮಾತ್ರ ಅನ್ವಯವಾಗುತ್ತದೆ.

ಈ ಆದೇಶವನ್ನು ಕಾನೂನು ಇಲಾಖೆಯು ಟಿಪ್ಪಣಿ ಸಂಖ್ಯೆ: LAW 333 OPN 2022, ದಿನಾಂಕ: 09-11-2022 ರಲ್ಲಿ ನೀಡಿರುವ ಅಭಿಪ್ರಾಯ ಮತ್ತು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ: ಆಇ 52 ವೆಚ್ಚ 11 2023 (ಇ), ದಿನಾಂಕ: 02-02-2023 ಮತ್ತು 28-02-2023 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Pushpa V.S.

(ಪುಷ್ಪ ವಿ. ಎಸ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಸಾರಿಗೆ ಇಲಾಖೆ.

**ಇವರಿಗೆ:-**

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ &ಎಸ್‌ಎಸ್‌ಎ) ಕರ್ನಾಟಕ, ಹೊಸಕಟ್ಟಡ, ಆಡಿಟ್ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398 ಹಾಗೂ ಪ್ರಧಾನ ಮಹಾಲೇಖಪಾಲರು (ಎ & ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5359, ಬೆಂಗಳೂರು–560001.
2. ರಾಜ್ಯ ಪೊಲೀಸ್ ಮಹಾ ನಿರ್ದೇಶಕರು ಹಾಗೂ ಅರಕ್ಷಕ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು.
3. ಆಯುಕ್ತರು, ಸಾರಿಗೆ ಮತ್ತು ರಸ್ತೆ ಸುರಕ್ಷತೆ, ಟಿ.ಟಿ.ಎಂ.ಸಿ. ಸಂಕೀರ್ಣ, 'ಎ' ಬ್ಲಾಕ್, 1ನೇ ಮಹಡಿ, ಶಾಂತಿನಗರ, ಬೆಂಗಳೂರು.

**ಪ್ರತಿ:-**

1. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಕಾರ್ಯದರ್ಶಿ, ಸಾರಿಗೆ ಇಲಾಖೆ ರವರ ಪತ್ರಾಂಕಿತ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿ, ಸಾರಿಗೆ ಇಲಾಖೆ ರವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಸಾರಿಗೆ ಇಲಾಖೆ ರವರ ಆಪ್ತ ಸಹಾಯಕರು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
10. ಹೆಚ್ಚುವರಿ ಪ್ರತಿಗಳು / ಶಾಖಾ ರಕ್ಷಾಕಡತ / ಒ.ಡಿ.ಜಿ.ಸಿ.,